292. ಹಿಂದುಳಿದ ವರ್ಗಗಳ ಜನಾಂಗದ ಸಂಘ–ಸಂಸ್ಥೆಗಳು ನಡೆಸುವ ಖಾಸಗಿ ವಿದ್ಯಾರ್ಥಿನಿಲಯಗಳ ನಿರ್ವಹಣಾ ವೆಚ್ಚಕ್ಕಾಗಿ ಗರಿಷ್ಠ 5 ಲಕ್ಷ ರೂ.ಗಳವರೆಗೆ ಅನುದಾನ ನೀಡಲಾಗುವುದು.

293. ಈ ವಲಯಕ್ಕಾಗಿ ಪ್ರಸಕ್ತ ಸಾಲಿನಲ್ಲಿ 1,369 ಕೋಟಿ ರೂ.ಗಳನ್ನು ಒದಗಿಸಲಾಗುವುದು.

## ಅಲ್ಪಸಂಖ್ಯಾತರ ಅಭಿವೃದ್ಧಿ

294. ಎಸ್.ಎಸ್.ಎಲ್.ಸಿ ಹಾಗೂ ಅದರ ನಂತರದ ಪ್ರತಿಭಾವಂತ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುವುದು.

295. ಕೇಂದ್ರ ಪುರಸ್ಕೃತ ಯೋಜನೆಗಳಡಿಯಲ್ಲಿ ಭಾರತ ಸರ್ಕಾರದಿಂದ ವಿದ್ಯಾರ್ಥಿವೇತನ ಪಡೆಯಲಾಗದ ಅಭ್ಯರ್ಥಿಗಳಿಗೆ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಅರ್ಹತೆ ಹಾಗೂ ಅಗತ್ಯತೆ ವಿದ್ಯಾರ್ಥಿವೇತನಗಳನ್ನು ಒದಗಿಸುವ ಸಲುವಾಗಿ ಹೊಸ ಯೋಜನೆಯೊಂದನ್ನು ಆರಂಭಿಸಲಾಗುವುದು.

296. ಅಲ್ಪಸಂಖ್ಯಾತ ಹೆಣ್ಣು ಮಕ್ಕಳ ಮದುವೆಗೆ ಆರ್ಥಿಕ ಸಹಾಯವನ್ನು ಒದಗಿಸಲು ಹೊಸ ಯೋಜನೆಯೊಂದನ್ನು ಆರಂಭಿಸಲಾಗುವುದು.

297. ಎರಡು ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಆರಂಭಿಸಲಾಗುವುದು.

298. ಶಾದಿ ಮಹಲ್/ಸಮುದಾಯ ಭವನಗಳ ನಿರ್ಮಾಣಕ್ಕಾಗಿ ಪ್ರಸ್ತುತ ಇರುವ ಘಟಕ ವೆಚ್ಚವನ್ನು ಜಿಲ್ಲಾ ಮಟ್ಟದಲ್ಲಿ 50 ಲಕ್ಷ ರೂ.ಗಳಿಂದ 1 ಕೋಟಿ ರೂ.ಗಳಿಗೂ ಹಾಗೂ ತಾಲ್ಲೂಕು ಮಟ್ಟದಲ್ಲಿ 20 ಲಕ್ಷ ರೂ.ಗಳಿಂದ 50 ಲಕ್ಷ ರೂ.ಗಳಿಗೂ ಹೆಚ್ಚಿಸಲಾಗುವುದು. ಇದಕ್ಕಾಗಿ 25 ಕೋಟಿ ರೂ.ಗಳನ್ನು ಒದಗಿಸಲಾಗುವುದು.

299. ಅಲ್ಪಸಂಖ್ಯಾತರ ಯಾತ್ರಾ ಸ್ಥಳಗಳಲ್ಲಿ ಮೂಲ ಸೌಕರ್ಯಗಳನ್ನು ಸೃಜಿಸುವ ಸಲುವಾಗಿ ಒಂದು ಕೋಟಿ ರೂ.ಗಳನ್ನು ಒದಗಿಸಲಾಗುವುದು.

300. ವಕ್ಫ್ ಸಂಸ್ಥೆಗಳ ಪರಿಣಾಮಕಾರಿ ಹಾಗೂ ಸಮರ್ಪಕ ಆಡಳಿತಕ್ಕಾಗಿ ಅದರ ಅಧ್ಯಕ್ಷರು / ಸಿಬ್ಬಂದಿ / ಸದಸ್ಯರು / ಮುತಾವಲಿಗಳಿಗೆ ತರಬೇತಿ ನೀಡಲಾಗುವುದು.

301. ಅಲ್ಪಸಂಖ್ಯಾತರ ಕಾರ್ಯಕ್ರಮಗಳ ಬಗ್ಗೆ ಸಮುದಾಯದಲ್ಲಿ ಜಾಗೃತಿ ಮೂಡಿಸಿ ಸಮುದಾಯದ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸಲು ತಾಲ್ಲೂಕು ಮಟ್ಟದಲ್ಲಿ ಹಾಗೂ ನಗರ ಕೇಂದ್ರಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಕೋಶವನ್ನು ಆರಂಭಿಸಲಾಗುವುದು.

302. ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಘಟಕ ವೆಚ್ಚವನ್ನು 1.5 ಲಕ್ಷ ರೂ.ಗಳಿಂದ 2 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು. ಈ ಯೋಜನೆಯಡಿ 44 ಕೋಟಿ ರೂ.ಗಳನ್ನು ಒದಗಿಸಲಾಗುವುದು.

303. ವಸತಿ ರಹಿತ ಅಲ್ಪಸಂಖ್ಯಾತರಿಗೆ ನಿವೇಶನ ಖರೀದಿ ಹಾಗೂ ಗೃಹಸಾಲಕ್ಕಾಗಿ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. 5 ಲಕ್ಷ ರೂ.ಗಳಿಗಿಂತ ಕಡಿಮೆ ಮನೆ ಸಾಲಕ್ಕೆ 1 ಲಕ್ಷ ರೂ.ಗಳವರೆಗಿನ ಬಡ್ಡಿಯನ್ನು ಹಿಂಭರಿಸುವ ಮೂಲಕ ಬಡ್ಡಿ ಸಹಾಯಧನವನ್ನು ನೀಡಲು ಪ್ರಸ್ತಾಪಿಸಿದೆ. ಇದಕ್ಕಾಗಿ 25 ಕೋಟಿ ರೂ.ಗಳನ್ನು ಒದಗಿಸಲಾಗುವುದು.

304. ಜೈನ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ 10 ಕೋಟಿ ರೂ. ಗಳನ್ನು ಒದಗಿಸಲಾಗುವುದು.

305. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಉತ್ತೇಜನ ಮತ್ತು ಪರಿಹಾರ ಬೋಧನೆ ಯೋಜನೆಗೆ 6.50 ಕೋಟಿ ರೂ.ಗಳನ್ನು ಒದಗಿಸಲಾಗುವುದು.

306. 86 ಹೊಸ ವಸತಿ ನಿಲಯಗಳನ್ನು ತೆರೆಯಲಾಗುವುದು ಮತ್ತು ವಿಶೇಷ ಅಭಿವೃದ್ಧಿ ಯೋಜನೆಯಡಿ 34 ವಸತಿನಿಲಯಗಳ ಕಟ್ಟಡ ನಿರ್ಮಾಣ ಮಾಡಲಾಗುವುದು.

307. ಎಂಎಸ್‌ಡಿಪಿ ಮತ್ತು ಎಸ್‌ಡಿಪಿ ಯೋಜನೆಯ ತಾಲ್ಲೂಕು ಪ್ರದೇಶಗಳನ್ನು ಹೊರತುಪಡಿಸಿ ಉಳಿದ ಪ್ರದೇಶಗಳಲ್ಲಿ ವಸತಿ ನಿಲಯಗಳನ್ನು ನಿರ್ಮಾಣ ಮಾಡಲು 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

308. ಜಿಲ್ಲಾ ಮಟ್ಟದಲ್ಲಿ ವಕ್ಫ್ ಆಸ್ತಿಗಳ ರಕ್ಷಣೆಗಾಗಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಕಾರ್ಯಪಡೆ ರಚಿಸಲಾಗುವುದು. ನಿಗದಿತ ಅವಧಿಯಲ್ಲಿ ವಕ್ಫ್ ಆಸ್ತಿಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲು ಈ ಕಾರ್ಯಪಡೆಗೆ ನಿರ್ದೇಶನ ನೀಡಲಾಗುವುದು. ಇದರ ಜೊತೆಗೆ ವಕ್ಫ್ ಕಟ್ಟಡಗಳ ದುರಸ್ತಿ ಹಾಗೂ ಜೀರ್ಣೋದ್ಧಾರಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು.

309. ರಾಜ್ಯದ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮಕ್ಕೆ ರಾಜ್ಯದ ಪಾಲಿನ 3 ಕೋಟಿ ರೂ.ಗಳನ್ನು ನೀಡಲಾಗುವುದು.

310. ಹಜ್ ಹೌಸ್ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ವರ್ಷಾಂತ್ಯದಲ್ಲಿ ಕಟ್ಟಡ ಕಾಮಗಾರಿಯು ಪೂರ್ಣಗೊಳ್ಳಲಿದ್ದು, ಇದಕ್ಕಾಗಿ ಪ್ರಸ್ತುತ ಸಾಲಿನಲ್ಲಿ 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

311. ಒಟ್ಟಾರೆ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ 676 ಕೋಟಿ ರೂ.ಗಳನ್ನು ಒದಗಿಸಲಾಗುವುದು. ಈ ಪೈಕಿ ಕ್ರಿಶ್ಚಿಯನ್ ಸಮುದಾಯಕ್ಕಾಗಿ 100 ಕೋಟಿ ರೂ.ಗಳನ್ನು ಮೀಸಲಿಡಲಾಗುವುದು.

**ವಸತಿ**

312. ಕರ್ನಾಟಕವನ್ನು ಗುಡಿಸಲು ರಹಿತ ರಾಜ್ಯವನ್ನಾಗಿ ರೂಪಿಸುವುದು ನಮ್ಮ ಆಶಯವಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಪ್ರತಿ ವರ್ಷ 3 ಲಕ್ಷ ಹೊಸ ಮನೆಗಳನ್ನು ನಿರ್ಮಾಣ ಮಾಡಲಾಗುವುದು.